# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಪ್ಪಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ನಿವೃತ್ತರಾಗಿರುವ ಶ್ರೀ ಬಿಎಲ್.ಮಲ್ಲಿಕಾರ್ಜುನ, ಕಿರಿಯ ಇಂಜನಿಯರ್ ಇವರಿಗೆ ಕ್ಷೇಮಾಭಿವೃದ್ಧಿ ಯೋಜನೆಯಡಿ ಬಾಕಿ ವೇತನ/ಉಪಧನವನ್ನು ಪಾವತಿಸಲು ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ:ಗ್ರಾಅಪ/260/ಜಿಪಸ/2019

**ಪ್ರಸ್ತಾವನೆ:**

ಕೊಪ್ಪಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಲ್ಲಿ ಶ್ರೀ ಬಿ.ಎಲ್.ಮಲ್ಲಿಕಾರ್ಜುನ ಇವರು ದಿನಾಂಕ:1.7.1984 ರ ಪೂರ್ವದಲ್ಲಿ ದಿನಗೂಲಿ ಆಧಾರದ ಮೇಲೆ ನೇಮಕ ಹೊಂದಿದ್ದಾರೂ ಸಹ ಸದರಿಯವರು ಕಾರಣಾಂತರಗಳಿಂದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಆದೇಶ ಸಂಖ್ಯೆ:ಸಿಆಸಇ 2 ಎಸ್.ಎಲ್.ಸಿ 1990, ದಿನಾಂಕ:06.8.1990 ರ ಅನುಸಾರ ಸೇವಾ ಸಕ್ರಮಾತಿ ಹೊಂದಿರುವುದಿಲ್ಲ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ಕರ್ನಾಟಕ ವಿರುದ್ಧ ಶ್ರೀಮತಿ ಉಮಾದೇವಿ ಪ್ರಕರಣದಲ್ಲಿ ದಿನಾಂಕ:10.4.2006 ರ ತೀರ್ಪಿನ ಹಿನ್ನಲೆಯಲ್ಲಿ ಶ್ರೀ ಬಿ.ಎಲ್.ಮಲ್ಲಿಕಾರ್ಜುನ ಇವರು ಸಕ್ರಮಾತಿಗೆ ಅರ್ಹರಿರುವುದಿಲ್ಲವಾದ್ದರಿಂದ, ಸದರಿಯವರನ್ನು ದಿನಗೂಲಿ ನೌಕರರ ಕ್ಷೇಮಭಿವೃದ್ಧಿ ಅಧಿನಿಯಮ –2012 ರಡಿ, ದಿನಾಂಕ:28.10..2014 ರಂದು ಅಧಿಸೂಚಿಸಲಾಗಿದೆ.

ಅದರಂತೆ ಸದರಿಯವರು ನಿಯಮಾನುಸಾರ ವೇತನ ಸೌಲಭ್ಯಗಳನ್ನು ಪಡೆಯಲು ಅರ್ಹರಿದ್ದರೂ ಸಹ ಸದರಿಯವರಿಗೆ ಪ್ರತಿ ಮಾಹೆ ಮಾಸಿಕ ರೂ.4575/– ಗಳನ್ನು ಪಾವತಿಸುತ್ತಿದ್ದು, ಅದೇ ವೇತನದಲ್ಲಿ ಸದರಿಯವರು ದಿನಾಂಕ:31.7.2019 ರಂದು ದಿನಗೂಲಿ ಸೇವೆಯಿಂದ ನಿವೃತ್ತಿ ಹೊಂದಿರುತ್ತಾರೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ದಿನಾಂಕ:28.10.2014 ರಿಂದ ಅಧಿನಿಯಮದಡಿ ಲಭ್ಯವಾಗುವ ಬಾಕಿ ವೇತನವನ್ನು ಲೆಕ್ಕಚಾರ ಮಾಡಿ ರೂ.12,92,030/– ಹಾಗೂ ವಾರ್ಷಿಕ 15 ದಿನಗಳಂತೆ ಲಭ್ಯವಾಗುವ ಮೊತ್ತ ರೂ. 88,259.00 ಒಟ್ಟು ರೂ.13,80,289.00ಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತಿ ಕಾರ್ಯಕ್ರಮದಡಿ ಕೋರಿರುವ ರೂ.13,80,289.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2059–80–196–1–05–300ರಡಿ ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 269 ವೆಚ್ಚ 6/2020(ಇ) ದಿನಾಂಕ: 28ನೇ ಸೆಪ್ಟೆಂಬರ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ/ಉಪಧನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ13,80,289.00 (ರೂಪಾಯಿ ಹದಿಮೂರು ಲಕ್ಷದ ಎಂಬತ್ತು ಸಾವಿರದ ಎರಡು ನೂರ ಎಂಬತ್ತೊಂಬತ್ತುಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

| ಕ್ರಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2059–80–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೊಪ್ಪಳ | 2059–00–101–0–26–033 | 13,80,289–00 |
| | | ಒಟ್ಟು | **13,80,289–00** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

1415054888
28.9.2020

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1 ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು

ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3. ಮುಖ್ಯ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಪ್ಪಳ
5. ಜಿಲ್ಲಾ ಖಜಾನಾಧಿಕಾರಿಗಳು, ಕೊಪ್ಪಳ
6. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ